सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

2ನೇ ಮತ್ತು 3ನೇ ಮಹಡಿ, ನಂ. 16, ಬಳ್ಳಾರಿ ರಸ್ತೆ, ಸದಾಶಿವನಗರ, ಬೆಂಗಳೂರು-560080

## ರಾಜ್ಯ ಚುನಾವಣಾ ಆಯೋಗದ ನಡವಳಿಗಳು

ವಿಷಯ: ನಗರ ಸ್ಥಳೀಯ ಸಂಸ್ಥೆಗಳ ಉಪ ಚುನಾವಣೆ-2022 ಸದಲಗಾ ಪುರಸಭೆ ಉಪ ಚುನಾವಣಾ ಪ್ರಕ್ರಿಯೆಯನ್ನು ಸ್ಥಗಿತಗೊಳಿಸುವ ಕುರಿತು.

ಓದಲಾಗಿದೆ:
1. ಆಯೋಗದ ಆದೇಶ ಸಂಖ್ಯೆ: ರಾಚುಆ 147 ಇಯುಬಿ 2022, ದಿನಾಂಕ: 03.10.2022.
2. ಕರ್ನಾಟಕ ಉಚ್ಚ ನ್ಯಾಯಾಲಯ ಪೀಠ, ಧಾರವಾಡ, ಪ್ರಕರಣ ಸಂಖ್ಯೆ W.A. 100196/2022ರ ಮಧ್ಯಂತರ ಆದೇಶ ದಿನಾಂಕ: 14.10.2022.

-*-*-

ಪ್ರಸ್ತಾವನೆ:

ಮೇಲೆ ಓದಲಾದ (1)ರ ಆದೇಶದಲ್ಲಿ, ವಿವಿಧ ಕಾರಣಗಳಿಂದ ತೆರವಾಗಿರುವ ನಗರ ಸ್ಥಳೀಯ ಸಂಸ್ಥೆಗಳ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ ನಡೆಸಲು ಚುನಾವಣಾ ವೇಳಾಪಟ್ಟಿಯನ್ನು ಘೋಷಿಸಲಾಗಿದ್ದು, ಸದರಿ ಆದೇಶದನ್ವಯ ಜಿಲ್ಲಾಧಿಕಾರಿಗಳು ಮತ್ತು ಚುನಾವಣಾಧಿಕಾರಿಗಳು ದಿನಾಂಕ: 10.10.2022 ರಂದು ಚುನಾವಣಾ ಅಧಿಸೂಚನೆಯನ್ನು ಹೊರಡಿಸಿರುತ್ತಾರೆ.

ಜಿಲ್ಲಾಧಿಕಾರಿಗಳು, ಬೆಳಗಾವಿ ರವರ ದಿನಾಂಕ 28.10.2021ರ ಆದೇಶದಲ್ಲಿ ಸದಲಗಾ ಪುರಸಭೆ ವಾರ್ಡ್ ಸಂಖ್ಯೆ 05, 12, 15 ಮತ್ತು 16ರ ಸದಸ್ಯರನ್ನು ಅನರ್ಹಗೊಳಿಸಿರುವ ಆದೇಶವನ್ನು ಪ್ರಶ್ನಿಸಿ, ಕರ್ನಾಟಕ ಉಚ್ಚ ನ್ಯಾಯಾಲಯ ಪೀಠ, ಧಾರವಾಡದಲ್ಲಿ ದಾಖಲಾದ ಪ್ರಕರಣ ಸಂಖ್ಯೆ W.A. 100196/2022 ರಲ್ಲಿ ದಿನಾಂಕ: 14.10.2022 ರಂದು ಮಧ್ಯಂತರ ಆದೇಶವಾಗಿದ್ದು, ನ್ಯಾಯಾಲಯವು ಸದಸ್ಯ ಸ್ಥಾನ ತೆರವು ಮಾಡಿರುವ ಜಿಲ್ಲಾಧಿಕಾರಿಗಳ ದಿನಾಂಕ 28.10.2021ರ ಆದೇಶಕ್ಕೆ ಹಾಗೂ ಚುನಾವಣಾ ವೇಳಾಪಟ್ಟಿಗೆ ಮಧ್ಯಂತರ ತಡೆಯಾಜ್ಞೆ ನೀಡಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸಂಖ್ಯೆ: ರಾಚುಆ 147 ಇಯುಬಿ 2022, ಬೆಂಗಳೂರು, ದಿನಾಂಕ: 15.10.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕು, ಸದಲಗಾ ಪುರಸಭೆಯ ವಾರ್ಡ್ ಸಂಖ್ಯೆ- 05, 12, 15 ಮತ್ತು 16ರ ಉಪ ಚುನಾವಣೆಯ ಮುಂದಿನ ಪ್ರಕ್ರಿಯೆಗಳನ್ನು ಆಯೋಗದ ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸಿ ಆದೇಶಿಸಿದೆ.

ಆದೇಶಾನುಸಾರ,

ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
15/10/2022

ಇವರಿಗೆ,
ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು, ಬೆಳಗಾವಿ ಜಿಲ್ಲೆ ಇವರಿಗೆ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ.